# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 20/09/2021ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ–ಸಭೆ –08/2021–22 ದಿನಾಂಕ: 20.09.2021

ದಿನಾಂಕ: 20/09/2021 ರಂದು ಬೆಳಿಗ್ಗೆ 10.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

<u>ಹಾಜರಿದ್ದವರು:</u>

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ–ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀ ಗವಿಸಿದ್ದಯ್ಯ | ಸಹಾಯಕ ಅಭಿಯಂತರರು (ವಿದ್ಯುತ್) ರಾರಾನಗರ ವಲಯ, ಬಿಬಿಎಂಪಿ |
| 4 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 5 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬೆಂಗಳೂರು ಜಲ ಮಂಡಳಿ |
| 6 | ಶ್ರೀ ಕೃಷ್ಣನಾಯಕ್ | ಕೆಲಸಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |
| 7 | ಶ್ರೀ ಹನುಮೇಶ | ಮಾರ್ಷಲ್ ವಾರ್ಡ್ ನಂ.198 |



Scanned by CamScanner

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು. ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

- **ಬೆಂಗಳೂರು ವಿದ್ಯುತ್ ಸರಬರಾಜು ನಿಗಮ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹೊಸದಾಗಿ ವಿದ್ಯುತ್ ಕಂಬಳನ್ನು ಅಳವಡಿಸಬೇಕಾಗಿ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಬೆಸ್ಕಾಂ ಅಧಿಕಾರಿಗಳೊಂದಿಗೆ ಮಾತನಾಡಿದಾಗ ಬೆಸ್ಕಾಂ ಅಧಿಕಾರಿಗಳು ವಿಜಯಶ್ರೀ ಬಡಾವಣೆಯಲ್ಲಿ ಶ್ರೀ ಗುಂಡುರಾವ್ ರವರು ವಿದ್ಯುತ್ ಕಂಬವನ್ನು ಅಳವಡಿಸಲು ಕೋರಿರುವ ರಸ್ತೆಯಲ್ಲಿ ಯಾವುದೇ ಮನೆಯು ನಿರ್ಮಾಣವಾಗಿರುವುದಿಲ್ಲವೆಂದು ಮತ್ತು ಸದರಿ ರಸ್ತೆಯಲ್ಲಿ ವಿದ್ಯುತ್ ಕಂಬವನ್ನು ಅಳವಡಿಸಲು ಅವಕಾಶವಿರುವುದಿಲ್ಲವೆಂದು ತಿಳಿಸಿದರು ಮತ್ತು ಪವಮಾನಪುರ 1ನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಮಾತನಾಡಿ ಪವಮಾನಪುರ 1ನೇ ಹಂತಕ್ಕೆ ಹೊಸದಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಬೇಕಾಗಿ ಸಭೆಗೆ ಕೋರಿದರು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಬೆಸ್ಕಾಂ ಕಛೇರಿ ಕೆಂಗೇರಿ ರವರಿಗೆ ಮನವಿಯನ್ನು ಸಲ್ಲಿಸಿ ನಿಗಧಿತ ಶುಲ್ಕವನ್ನು ಪಾವತಿಸಿ ಹೊಸ ವಿದ್ಯುತ್ ಕಂಬಗಳನ್ನು ಅಳವಡಿಸಿಕೊಳ್ಳಲು ತಿಳಿಸಿದರು.



Scanned by CamScanner

❖ <u>ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹೊಸ ವಿದ್ಯುತ್ ದೀಪಗಳನ್ನು ಅಳವಡಿಸಬೇಕಾಗಿ ಮತ್ತು ಪವಮಾನಪುರ 1ನೇ ಹಂತದಲ್ಲಿ ಹೊಸ ವಿದ್ಯುತ್ ದೀಪಗಳನ್ನು ಅಳವಡಿಸಲು ಸಭೆಗೆ ಕೋರಲಾಯಿತು. ಈ ಸಂಬಂಧ ಸಭೆಯಲ್ಲಿ ಹಾಜರಿದದ್ ಪಾಲಿಕೆಯ ವಿದ್ಯುತ್ ವಿಭಾಗದ ಅಧಿಕಾರಿಗಳು ಮಾತನಾಡಿ ಗ್ಲೋಬಲ್ ಟೆಂಡರ್‌ನ ಮುಖಾಂತರ ಹೊಸ ವಿದ್ಯುತ್ ದೀಪಗಳನ್ನು ಅಳವಡಿಸುವ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು, ಡಿಸೆಂಬರ್ ಅಂತ್ಯದ ವೇಳೆಗೆ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ಬೀದಿ ದೀಪಗಳ ವ್ಯವಸ್ಥೆಯನ್ನು ಕಲ್ಪಿಸಲಾಗುವುದೆಂದು ಸಭೆಗೆ ತಿಳಿಸಿದರು.

❖ <u>ಬೆಂಗಳೂರು ಜಲ ಮಂಡಳಿಗೆ ಸಂಬಂಧಿಸಿದ ದೂರಿನ ಬಗ್ಗೆ:-</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಒಳ ಚರಂಡಿ ಪೈಪ್ ಹೊಡೆದುಹೋಗಿದ್ದು, ಸದರಿ ಪೈಪ್‌ನ್ನು ದುರಸ್ಥಿಪಡಿಸಲು ಸಭೆಗೆ ಕೋರಿದರು. ಈ ಸಂಬಂಧ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಜಲಮಂಡಳಿ ಅಧಿಕಾರಿರವರನ್ನು ಕೋರಲಾಯಿತು.

❖ <u>ಘನತ್ಯಾಜ್ಯ ನಿರ್ವಹಣೆ ಬಗ್ಗೆ:-</u> ವಾರ್ಡ್ ನಂ.198ರಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹಾಗೂ ಸುತ್ತಮುತ್ತಲಿನ ಬಡಾವಣೆಗಳಲ್ಲಿ ರಸ್ತೆಯ ಸ್ವಚ್ಚತಾ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಪ್ರಸ್ತುತ ವಾರ್ಡ್‌ನ ವಿಸ್ತೀರ್ಣ ಸುಮಾರು 30.54 ಚ.ಕಿಲೋ ಮೀಟರ್ ವ್ಯಾಪ್ತಿಯನ್ನು ಒಳಗೊಂಡಿದ್ದು, ಮೈಕ್ರೋ ಪ್ಲಾನ್‌ನ ಅಂಕಿ ಅಂಶಗಳ ಪ್ರಕಾರ 295 ಪೌರ ಕಾರ್ಮಿಕರ ಅವಶ್ಯಕತೆ ಇದ್ದು, ಹಾಲಿ 166 ಪೌರ ಕಾರ್ಮಿಕರು ಕೆಲಸ ನಿರ್ವಹಿಸುತ್ತಿರುತ್ತಾರೆ. ಪೌರ ಕಾರ್ಮಿಕರ ಕೊರತೆಯಿಂದ ವಾರ್ಡ್‌ನಲ್ಲಿ ಸಮರ್ಪಕವಾಗಿ ಸ್ವಚ್ಚತಾ ಕಾರ್ಯ ನಿರ್ವಹಿಸಲು ಸಾಧ್ಯವಾಗುತ್ತಿರುವುದಿಲ್ಲವೆಂದು ಹಾಗೂ ಹೆಚ್ಚುವರಿಯಾಗಿ 120 ಪೌರಕಾರ್ಮಿಕರನ್ನು ನಿಯೋಜಿಸಿಕೊಡಬೇಕೆಂದು ಸಭೆಯ ಗಮನಕ್ಕೆ ತಂದರು ಮತ್ತು ಬಾಲಾಜಿ ಬಡಾವಣೆಯ ಮಕ್ಕಳ ಉದ್ಯಾನವನಕ್ಕೆ ಹೊಂದಿಕೊಂಡಂತೆ ಇರುವ ಒಣಕಸ ವಿಂಗಡಣಾ ಕೇಂದ್ರದಿಂದ ಕಸವನ್ನು ಸುರಿದು ಉದ್ಯಾನವನ್ನು ಕಲುಷಿತಗೊಳಿಸುತ್ತಿರುವುದರ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದರು.



Scanned by CamScanner

❖ **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ** :- 1) ವಾರ್ಡ್ ನಂ.198ರಲ್ಲಿ ಬರುವ 110 ಹಳ್ಳಿಗಳಲ್ಲಿ ಕುಡಿಯುವ ನೀರಿನ & ಬೋರ್‌ವೆಲ್ ನಿರ್ವಹಣೆಯನ್ನು ಸಮರ್ಪಕವಾಗಿ ಹಾಗೂ ತ್ವರಿತವಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಮತ್ತು ಬಾಲಜಿ ಬಡಾವಣೆಯ ಚಿಕ್ಕ ಟ್ಯಾಂಕ್ ಹತ್ತಿರ ಇರುವ ಬೋರ್‌ವೆಲ್ ಮೋಟಾರ್ ಪಂಪ್‌ನ್ನು ದುರಸ್ಥಿಪಡಿಸದೇ ಇರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಸಹಾಯಕ ಅಭಿಯಂತರರು ಮಾತನಾಡಿ ಕುಡಿಯುವ ನೀರಿನ ವ್ಯವಸ್ಥೆಯ ನಿರ್ವಹಣೆ, ರಿಪೇರಿ ಹಾಗೂ ದುರಸ್ಥಿಗಾಗಿ ಪ್ರತಿ ವರ್ಷ ಪಿ.ಓ.ಡಬ್ಲ್ಯೂ. ಅನುದಾನದಡಿ ಕಾಮಗಾರಿ ನಿರ್ವಹಿಸಲಾಗುತ್ತಿದ್ದು, ಆದರೆ 2020-21ನೇ ಸಾಲಿನಲ್ಲಿ ಹಾಗೂ 2021-22ನೇ ಸಾಲಿನಲ್ಲಿ ಕುಡಿಯುವ ನೀರಿನ ವ್ಯವಸ್ಥೆಯ ನಿರ್ವಹಣೆಗೆ ಅನುದಾನವು ಬಿಡುಗಡೆಯಾಗಿರುವುದಿಲ್ಲವೆಂದು ಮತ್ತು ವಾರ್ಡ್‌ನಲ್ಲಿ ಬರುವ 10 ಹಳ್ಳಿಗಳಲ್ಲಿ ಬರುವ ಕೊಳವೆ ಬಾವಿಗಳನ್ನು ಮೋಟರ್ ಪಂಪ್‌ಗಳನ್ನು ನಿರ್ವಹಣೆ, ರಿಪೇರಿ ಹಾಗೂ ದುರಸ್ಥಿ ಮಾಡಿಸಲು ಸಾಧ್ಯವಾಗುತ್ತಿರುವುದಿಲ್ಲವೆಂದು ಈ ಸಂಬಂಧ ಮಾನ್ಯ ಸಹಕಾರ ಸಚಿವರ ಶಿಫಾರಸ್ಸು ಪತ್ರದೊಂದಿಗೆ ಅನುದಾನ ಬಿಡುಗಡೆ ಮಾಡಲು ಕೋರಿ ಮಾನ್ಯ ಮುಖ್ಯ ಆಯುಕ್ತರಿಗೆ ಕೋರಲಾಗಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದರು.

**2)** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ 110 ಹಳ್ಳಿಗಳ ವ್ಯಾಪ್ತಿಯಲ್ಲಿ ಟೆಂಡರ್ ಮುಖಾಂತರ ಕೆಲಸ ನಿರ್ವಹಿಸುತ್ತಿರುವ ಹೊರ ಗುತ್ತಿಗೆ ನೀರುಗಂಟಿಗಳಿಗೆ ಸುಮಾರು 10 ತಿಂಗಳುಗಳಿಂದ ವೇತನ ಪಾವತಿಯಾಗದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಪ್ರತಿ ವರ್ಷವು ಸಂಬಂಧಿಸಿದ ಲೆಕ್ಕಶೀರ್ಷಿಕೆಯಲ್ಲಿ ವಾಟರ್‌ಮನ್‌ಗಳ ಕಾರ್ಯನಿರ್ವಹಣೆಗೆ ಅನುದಾನವನ್ನು ನಿಗಧಿ ಮಾಡಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ ಹಾಗೂ ಈ ಹಿಂದಿನ ಸಾಲಿನಲ್ಲಿ ಯಾವುದೇ ಲೆಕ್ಕಶೀರ್ಷಿಕೆಯಡಿ ಅನುದಾನವನ್ನು ನಿಗಧಿ ಮಾಡದೇ ಇರುವ ಕಾರಣ ಟೆಂಡರ್ ಮುಖಾಂತರ ನೀರುಗಂಟಿಗಳಿಗೆ ವೇತನವನ್ನು ಪಾವತಿಸಲು ಸಾಧ್ಯವಾಗಿರುವುದಿಲ್ಲ. ಈ ಸಂಬಂಧ ವೇತನವನ್ನು ಬಿಡುಗಡೆ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಮಾನ್ಯ ಮುಖ್ಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು (ಹಣಕಾಸು) ರವರಿಗೆ ಪ್ರಸ್ತಾವನೆಯನ್ನು ಸಲ್ಲಿಸಿ ಅನುಮೋದನೆಯನ್ನು ಪಡೆಯಲಾಗಿದ್ದು, ವಲಯದ ಡಿ.ಸಿ.ಎಫ್. ಕಛೇರಿಯ ಮುಖಾಂತರ ನೀರುಗಂಟಿಗಳ ವೇತನವನ್ನು ಪಾವತಿಸಲು ಕ್ರಮ ಕೈಗೊಳ್ಳಲಾಗಿರುವ ಬಗ್ಗೆ ಸಭೆಗೆ ತಿಳಿಸಿದರು.



Scanned by CamScanner

3) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಪವಮಾನಪುರ ಎರಡನೇ ಹಂತದಲ್ಲಿ ರಸ್ತೆ ನಿರ್ಮಾಣ, ಒಳಚರಂಡಿ ನಿರ್ಮಾಣ, ವಿದ್ಯುತ್ ಕಂಬಗಳ ಅಳವಡಿಕೆ, ಚರಂಡಿಗಳ ನಿರ್ಮಾಣ ಮಾಡಲು ನಿವೇಶನಗಳ ಮಾಲೀಕರ ಸಂಘದಿಂದ ಕೋರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಸದರಿ ಬಡಾವಣೆಯನ್ನು ಈಗಾಗಲೇ ಸ್ಥಳ ಪರಿಶೀಲನೆ ಮಾಡಲಾಗಿದ್ದು, ಸ್ಥಳದಲ್ಲಿ ವಿದ್ಯುತ್ ಕಂಬಗಳ ವ್ಯವಸ್ಥೆಯಾಗಲೀ ಕಲ್ಲು ಚಪ್ಪಡಿ ಚರಂಡಿ ಅಥವಾ ಮೆಟಲಿಂಗ್ ರಸ್ತೆಯನ್ನು ನಿರ್ವಹಿಸದಿರುವ ಬಗ್ಗೆ ಗಮನಿಸಲಾಗಿದ್ದು ಮತ್ತು ಸದರಿ ಬಡಾವಣೆಯಲ್ಲಿ ವಿದ್ಯುತ್ ಕಂಬಗಳ ವ್ಯವಸ್ಥೆ ಇಲ್ಲದೇ ಇರುವುದು ಹಾಗೂ ಯಾವುದೇ ನಿವೇಶನದಲ್ಲಿ ಕಟ್ಟಡವನ್ನು ನಿರ್ಮಾಣ ಮಾಡಿರುವುದು ಕಂಡುಬಂದಿರುವುದಿಲ್ಲವೆಂದು ಸಭೆಗೆ ತಿಳಿಸುತ್ತಾ ಸದರಿ ಬಡಾವಣೆಯನ್ನು ನಿರ್ಮಾಣ ಮಾಡಿದಂತಹ ಏಜೆನ್ಸಿಯವರು ಸಕ್ಷಮ ಪ್ರಾಧಿಕಾರದಿಂದ ಬಡಾವಣೆಯ ನಕ್ಷೆಯನ್ನು ಅನುಮೋದನೆ ಪಡೆದುಕೊಂಡು ಬಡಾವಣೆಯನ್ನು ಅಭಿವೃದ್ಧಿಪಡಿಸಿ ಪಾಲಿಕೆಗೆ ಹಸ್ತಾಂತರಿಸಬೇಕಾಗಿರುವುದು ನಿಯಮವಾಗಿರುತ್ತದೆ. ಆದ್ದರಿಂದ ಸಕ್ಷಮ ಪ್ರಾಧಿಕಾರದಿಂದ ಬಡಾವಣೆಯ ನಕ್ಷೆ ಅನುಮೋದನೆಯಾಗಿರುವ ಬಗ್ಗೆ ದಾಖಲಾತಿಗಳನ್ನು ಒದಗಿಸಿದ್ದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

<u>ಪ್ರತಿಯನ್ನು:-</u>

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.



Scanned by CamScanner

8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.ಪ
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



Scanned by CamScanner